**ಹೆಚ್ಚುವರಿ ಸಿವಿಲ್ ಮತ್ತು ಜೆ.ಎಮ್. ಎಫ್. ಸಿ ನ್ಯಾಯಾಧೀಶರ ನ್ಯಾಯಾಲಯ ಯಾದಗಿರಿ.**

**ಸಿಸಿ ನಂ. 337/2019**

| | | |
|---|---|---|
| ಸಾಕ್ಷಿಯ ಹೆಸರುಃ | ಚನ್ನಬಸಪ್ಪ | ಫ್ರಾಸಾಃ 2 |
| ತಂದೆ/ಗಂಡನ ಹೆಸರುಃ | ನಿಂಗಪ್ಪ | ಚಾಸಾಃ 3 |
| ವಯಸ್ಸು ಃ | 50 ವರ್ಷ | ದಿಃ 09-11-2023 |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಭೋದಿಸಲಾಯಿತು. |
| ವಾಸ ಸ್ಥಳಃ | ಅಲ್ಲಿಪೂರ | |

**<u>ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಬಿಯೋಜಕರವರಿಂದಃ</u>**

ನನಗೆ ಚಾಸಾಃ 2 ರವರ ಪರಿಚಯ ಇದೆ. ನನಗೆ ಆರೋಪಿತನ ಪರಿಚಯ ಇದೆ. 5 ವರ್ಷದ ಹಿಂದೆ ಬೆಳಿಗ್ಗೆ 9.00 ಗಂಟೆಗೆ ಹೊಲಕ್ಕೆ ಹೋಗುವಾಗ ಪೊಲಿಸರು ಪಂಚನಾಮೆಗೆ ಬಂದಾಗ ಜಗಳ ಎಲ್ಲಿ ಆಗಿರುತ್ತದೆ ಎಂದು ಕೇಳಿದಾಗ ನಾನು ಹೆಳಿರುತ್ತೇನೆ. ನಾನು ಪಂಚನಾಮೆಗೆ ಸಹಿ ಮಾಡಿರುತ್ತೇನೆ. ಸಾಕ್ಷಿಗೆ ಒಂದು ದಾಖಲಾತಿಯನಮ್ನು ತೋರಿಸಲಾಗಿ ಅದು ಗುನ್ನೆ ಸ್ಥಳದ ಪಂಚನಾಮೆಯಾಗಿದ್ದು ಅದನ್ನು ಸಾಕ್ಷಿಯು ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-2 ಎಂದು, ಸಾಕ್ಷಿಯು ತನ್ನ ಹೆಬ್ಬೆಟ್ಟಿನ ಗುರುತನ್ನು ನೋಡಿ ಗುರುತಿಸಿಕೊಂಡಿರುತ್ತಾನೆ.

**<u>ಪಾಟಿ ಸವಾಲುಃ ಆರೋಪಿ ಪರ ವಕೀಲರು ಶ್ರೀ. ಎಸ್. ಎನ್. ವೈ. ಇವರಿಂದ ಇಲ್ಲ</u>**

1. ನಾನು ಒಕ್ಕಲುತನ ಮಾಡುತ್ತೇನೆ. ನಾನು ಮುಂಜಾನೆ ಹೋಗಿ ಸಂಜೆ ಬರುತ್ತೇನೆ. ನಾನು ಯಾವ ಹೊಲಕ್ಕೆ ಹೋಗಿರುತ್ತೇನೆ ಎಂದು ನನಗೆ ನೆನಪಿಲ್ಲ ಸದರಿ ಚಾಸಾಃ 1 ರವರ ಮತ್ತು ನನ್ನ ಹೊಲ ಹತ್ತಿರವಿರುತ್ತದೆ. ಸದರಿ 5 ಕಿ.ಮೀ. ದೂರದಲ್ಲಿ ಪೋಲಿಸರು ಬೇಟಿಯಾದರು ಸದರಿ ಪೊಲಿಸರು ದಾರಿಯಹಲ್ಲಿ ಸಹಿ ಮಾಡಿಕೊಂಡಿರುತ್ತಾರೆ ಎಂದರೆ ಸರಿ. ನನಗೆ ಓದಲು ಬರೆಯಲು ಬರುವುದಿಲ್ಲ. ಗುನ್ನೆ ಪಂಚನಾಮೆಯಲ್ಲಿ ಬರೆದಿರುವ ವಿಷಯ ನನಗೆ

ಗೊತ್ತಿಲ್ಲ ಸಹಿ ಮಾಡಲು ಹೇಳಿದಾಗ ನಾನು ಸಹಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ನನಗೆ ಯಾವುದೇ ಮಾಹಿತಿ ಇಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ**

(ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು).

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಸಿವಿಲ್ ಮತ್ತು ಜೆಎಂಎಫ್‌ಸಿ**
**ನ್ಯಾಯಾಧೀಶರು ಯಾದಗಿರಿ**